# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿಬಿಎಂಪಿ/ಸಕಾಅ/ಕೊಉವಿ/ಪಿಆರ್/03/2021-22

ಸಹಾಯಕ ಅಭಿಯಂತರರ ಕಛೇರಿ
ಕೊಡಿಗೇಹಳ್ಳಿ ಉಪವಿಭಾಗ, ಯಲಹಂಕ ವಲಯ
9ನೇ ಅಡ್ಡರಸ್ತೆ, ಡಿ ಬ್ಲಾಕ್
ಸಹಕಾರನಗರ, ಬೆಂಗಳೂರು 560092
ದಿನಾಂಕ: 19.04.2022

**ದಿನಾಂಕ: 19.04.2022 ರಂದು ವಾರ್ಡ್ ಸಂಖ್ಯೆ 08 ರಲ್ಲಿ ನಡೆದ ವಾರ್ಡ್ ಸಮಿತಿಯ ಸಭೆಯ ನಡವಳಿಗಳು:-**

**ಸಭೆಗೆ ಹಾಜರಿದ್ದವರು:**

- ಶ್ರೀ ಗುರು, ಕಾರ್ಯಪಾಲಕಅಭಿಯಂತರರು, ನೋಡೆಲ್ ಅಧಿಕಾರಿಗಳು ಹಾಗೂ ಅಧ್ಯಕ್ಷರು ವಾರ್ಡ್ ಸಮಿತಿ.
- ಶ್ರೀ ಪ್ರವೀಣ್ಎ.ಆರ್., ಕಿರಿಯ ಅಭಿಯಂತರರು ಹಾಗೂ ವಾರ್ಡ್ ಸಮಿತಿ ಕಾರ್ಯದರ್ಶಿ
- ಶ್ರೀಮತಿ. ಕವಿತಾ, ಕಿರಿಯ ಆರೋಗ್ಯ ಪರಿವೀಕ್ಷಕರು, ಘನ ತ್ಯಾಜ್ಯ
- ಶ್ರೀ. ಡಾ॥ ರವಿ, ಆರೋಗ್ಯ ವೈದ್ಯಾಧಿಕಾರಿ, ಪ್ರಾಥಮಿಕ ಆರೋಗ್ಯ ಕೇಂದ್ರ, ಕೊಡಿಗೇಹಳ್ಳಿ.
- ಶ್ರೀಮತಿ. ಚಿಂತನ, ಸಹಾಯಕ ಅಭಿಯಂತರರು (ಬೆಂಗಳೂರು ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ) (**BWSSB**)
- ಶ್ರೀ ಕೆ.ಎನ್. ಬಾಬುರೆಡ್ಡಿ, ಕಿರಿಯ ಅಭಿಯಂತರರು, ವಿದ್ಯುತ್ ವಿಭಾಗ, ಬಿಬಿಎಂಪಿ
- ಶ್ರೀ ವಿ. ಮಂಜುನಾಥ್,ಆರೋಗ್ಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ 08.
- ಶ್ರೀ ಎಂ.ಎನ್. ಮುನಿರಾಜು, ಕಿರಿಯ ಅಭಿಯಂತರರು, ಬೆಸ್ಕಾಂ
- ಶ್ರೀ ಜಿ. ವಿಶ್ವನಾಥ್, ಕಂದಾಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ 08.
- ಶ್ರೀ ಗೋವಿಂದರಾಜು.ಇ, ಸಹಾಯಕ ಅಭಿಯಂತರರು, ಬೆಸ್ಕಾಂ

**ವಾರ್ಡ್ ಸಮಿತಿ ಸದಸ್ಯರು**

- ಶ್ರೀಮತಿ. ಶಾಂತಕುಮಾರಿ, ಬಾಲಾಜಿ ಬಡಾವಣೆ, ಸದಸ್ಯರು
- ಶ್ರೀ ಕೃಷ್ಣಕುಮಾರ್ ಸಿ, ಡಿಫೆನ್ಸ್ ಕಾಲೋನಿ ಸದಸ್ಯರು
- ಶ್ರೀ ವೆಂಕಟಸ್ವಾಮಿ, ದೇವಿನಗರ, ಸದಸ್ಯರು

ವಾರ್ಡ್ ಸಮಿತಿ ಸಭೆಯನ್ನು ವಾರ್ಡ್ ಸಮಿತಿ ಕಾಯದರ್ಶಿಗಳಾದ ಶ್ರೀ.ಪ್ರವೀಣ್ಎ.ಆರ್.ರವರು ವಾರ್ಡ್ ಸಮಿತಿ ಅಧ್ಯಕ್ಷರು, ವಾರ್ಡ್ ಸಮಿತಿಯ ಸದಸ್ಯರುಗಳು ಹಾಗೂ ಎಲ್ಲಾ ವೃಂದದ ಅಧಿಕಾರಿಗಳನ್ನು ಸ್ವಾಗತಿಸುತ್ತಾ ಸಭೆಯನ್ನು ಪ್ರಾರಂಭಿಸಲಾಯಿತು ಹಾಗೂ ಈ ಹಿಂದಿನ ಸಭೆಯಲ್ಲಿ ಚರ್ಚಿಸಿದ ಸಮಸ್ಯೆಗಳನ್ನು ಪರಿಹರಿಸಲಾಗಿದೆ ಎಂದು ಸಭೆಗೆ ತಿಳಿಸಿದರು.

638

ಶ್ರೀ ಗುರು, ಕಾ.ಪಾ.ಅ ಹಾಗೂ ನೋಡಲ್ ಅಧಿಕಾರಿರವರು ಮಾತನಾಡುತ್ತ ಹಿಂದಿನ ಸಭೆಯ ನಡುವಳಿಗಳ ಬಗ್ಗೆ ಓದಿ ಚರ್ಚಿಸಿ, ಸಮಸ್ಯೆಗಳನ್ನು ಬಗೆಹರಿಸಿರುವ ಕುರಿತು ಹಾಜರಿದ್ದ ಅಧಿಕಾರಿಗಳಿಗೆ ಮತ್ತುವಸತಿ ಕ್ಷೇಮಾಭಿವೃದಿ ಸಂಘದ ಸದಸ್ಯರುಗಳ ಜೊತೆಗೆ ಚರ್ಚಿಸಿದರು. ನಂತರ ಹಾಜರಿದ್ದ ಅಧಿಕಾರಿಗಳು ಸಮಸ್ಯೆಗಳನ್ನು ಬಗೆಹರಿಸಿರುವುದಾಗಿ ಸಭೆಗೆ ತಿಳಿಸಿದರು.

ಶ್ರೀಮತಿ. ಶಾಂತಕುಮಾರಿ, ಬಾಲಾಜಿ ಬಡಾವಣೆ, ಸದಸ್ಯರು ಮಾತನಾಡಿ, ಚರಂಡಿಯಲ್ಲಿ ಸಿಲ್ಟ್ ತುಂಬಿರುವುದರಿಂದ ನೀರಿನ ಹರಿವು ಸಾರಾಗವಾಗಿ ಹರಿಯದೆ ಸ್ಥಗಿತವಾಗಿರುತ್ತದೆ. ಇದರಿಂದ ಸಾರ್ವಜನಿಕರಿಗೆ ಬಹಳ ತೊಂದರೆಯನ್ನುಂಟು ಮಾಡುತ್ತಿದೆ ಹಾಗೂ ಬೋರ್‌ವೆಲ್ ಇದ್ದು, ಈಗಾಗಲೇ ಸದರಿ ಬೋರ್‌ವೆಲ್‌ನಲ್ಲಿ ನೀರು ನಿಂತು ಹೋಗಿರುವುದರಿಂದ ಪರ್ಯಾಯ ಬೋರ್‌ವೆಲ್ ಕೊಳವೆಬಾವಿಯನ್ನು ಕೊರೆಯಿಸುವಂತೆ ಸಭೆಯಲ್ಲಿ ಮನವಿ ಮಾಡಿದರು.

ಈ ಕುರಿತು ನೋಡಲ್ ಅಧಿಕಾರಿಗಳು ಮಾತನಾಡಿ ಸಿಲ್ಟ್ ಮತ್ತು ಟ್ರಾಕ್ಟರ್ ಬಿಟ್ಟು ಸಮಸ್ಯೆಯನ್ನು ಬಗೆಹರಿಸಲು ಶ್ರೀ ಪ್ರವೀಣ್‌ರವರಿಗೆ ಸೂಚಿಸಿದರು. ನಂತರ ಶ್ರೀ ಪ್ರವೀಣ್, ಕಿರಿಯ ಅಭಿಯಂತರರು ಮಾತನಾಡಿ ಸದರಿ ಸಿಲ್ಟ್ ಮಣ್ಣನ್ನು ತೆಗೆದು ಒಣಗಿದ ನಂತರ ಡಂಪಿಂಗ್ ಯಾರ್ಡ್ ಗೆ ಸ್ಥಳಾಂತರಿಸಲಾಗುವುದು ಹಾಗೂ ಸದರಿ ಬೋರ್‌ವೆಲ್ ನಿರ್ವಹಣ ಅವಧಿ ಕಾಮಗಾರಿ ಮುಕ್ತಾಯವಾದ ಒಂದು ವರ್ಷವಾಗಿದ್ದು ನಂತರ ಬೋರ್‌ವೆಲ್ ಅನ್ನು ಬೆಂಗಳೂರು ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿರವರಿಗೆ ಹಸ್ತಾಂತರಿಸಲಾಗುವುದು ಎಂದು ಸಭೆಗೆ ತಿಳಿಸಿದರು.

ಈ ಕುರಿತುಶ್ರೀ ಗುರು, ನೋಡೆಲ್ ಅಧಿಕಾರಿಗಳು ಮಾತನಾಡಿ ಸದರಿ ಬಡಾವಣೆಯ ಸಮಸ್ಯೆಯನ್ನುಶ್ರೀ.ವಿಶ್ವನಾಥ್.,ಕಂದಾಯ ಪರಿವಿಕ್ಷಕರು ಹಾಗೂ ಶ್ರೀ ಪ್ರವೀಣ್ಎ.ಆರ್., ಕಿರಿಯಅಭಿಯಂತರರವರಿಗೆಒತ್ತುವರಿದಾರರಿಗೆ ಅವಕಾಶ ನೀಡದಂತೆ ಸಾರ್ವಜನಿಕ ಆಸ್ತಿಪಾಸ್ತಿಗಳನ್ನು ರಕ್ಷಿಸಲು ಫೆನ್ಸಿಂಗ್, ಕಾಂಪೌಡ್ ಹಾಗೂ ಸೂಕ್ತ ಕ್ರಮಗಳನ್ನು ಕೈಗೊಳ್ಳಲಸೂಚಿಸಿದರು.

ಶ್ರೀಮತಿ. ಶಾಂತಕುಮಾರಿ, ಬಾಲಾಜಿ ಬಡಾವಣೆ, ಸದಸ್ಯರು ಮಾತನಾಡಿ, ಸದರಿ ಬಡಾವಣೆ ರಸ್ತೆಯಲ್ಲಿರುವ ಅಂಗಡಿಗಳ ಎದುರು ವಾಹನಗಳನ್ನು ನಿಲ್ಲಿಸುತ್ತಿರುತ್ತಾರೆ. ಅದರಿಂದ ಸಾರ್ವಜನಿಕರಿಗೆ ಓಡಾಡಲು ತುಂಬಾ ಕಷ್ಟಕರವಾಗಿರುತ್ತದೆ ಅದನ್ನು ಸಹ ಸರಿಪಡಿಸಿ ಕೊಡಲುಕೋರಿದರು.

ಈ ಕುರಿತು ನೋಡಲ್ ಅಧಿಕಾರಿಗಳು ಮಾತನಾಡಿ ಹಿರಿಯ ಆರೋಗ್ಯ ನಿರಿಕ್ಷಕರಿಗೆ ಹಾಗೂ ಶ್ರೀ ಪ್ರವೀಣ್ ಎ. ಆರ್, ಕಿರಿಯಅಭಿಯಂತರರಿಗೆಜಂಟಿ ಸ್ಥಳ ಪರಿಶೀಲನೆ ಮಾಡಿ ವರದಿಯನ್ನು ನೀಡಲುಹಾಗೂ ಹಿರಿಯಆರೋಗ್ಯ ನಿರಿಕ್ಷಕರಿಗೆ ಸಂಬಂಧಿಸಿದ ಅಂಗಡಿಗಳಿಗೆ ನೋಟಿಸನ್ನು ಜಾರಿ ಮಾಡಲು ಹಾಗೂ ಮುಂದಿನ ಸಭೆಗೆ ಮುನ್ನವೆ ಸದರಿ ಸಮಸ್ಯೆ ಬಗೆಹರಿಸಲು ತಿಳಿಸಿದರು.

ಅಂತಿಮವಾಗಿ ಶ್ರೀ ಗುರು, ನೋಡಲ್ ಅಧಿಕಾರಿಯವರು ಈ ಮೇಲ್ಕಂಡ ಅಂಶಗಳ ಬಗ್ಗೆ ವಿವರವಾಗಿ ಅಧಿಕಾರಿಗಳಿಗೆ ನಿರ್ದೇಶನ ನೀಡಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮಕೈಗೊಳ್ಳಲು ಸೂಚಿಸಿದರು ನಂತರ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು ಮತ್ತು
ಕಿರಿಯ ಅಭಿಯಂತರರು
ವಾರ್ಡ್ 8, ಕೊಡಿಗೇಹಳ್ಳಿ ಉಪ ವಿಭಾಗ

ನೋಡಲ್ ಅಧಿಕಾರಿ ಹಾಗೂ
ವಾರ್ಡ್ ಸಮಿತಿ ಅಧ್ಯಕ್ಷರು
ವಾರ್ಡ್ ಸಂಖ್ಯೆ:08

<u>ಪ್ರತಿಯನ್ನು:-</u>

1. ಮಾನ್ಯ ಆಡಳಿತ ಅಧಿಕಾರಿಗಳು, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಮುಖ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
3. ಮಾನ್ಯ ಅಪರ ಆಯುಕ್ತರು, ಯಲಹಂಕ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
4. ಆರೋಗ್ಯಾಧಿಕಾರಿಗಳು, ಯಲಹಂಕ ವಲಯ, ಬಿಬಿಎಂಪಿ ರವರ ಮಾಹಿತಿಗಾಗಿಸಲ್ಲಿಸಿದೆ.
5. ವಲಯ ಅರಣ್ಯಾಧಿಕಾರಿಗಳು, ಯಲಹಂಕ ವಲಯ, ಬಿಬಿಎಂಪಿ ರವರ ಮಾಹಿತಿಗಾಗಿ ಹಾಗೂ ಮುಂದಿನ ಸಭೆಗೆ ಹಾಜರಾಗಲು ತಿಳಿಸಿದೆ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ರವರ ಮಾಹಿತಿಗಾಗಿ ಕಳುಹಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೊಡಿಗೇಹಳ್ಳಿ ಉಪವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಕಳುಹಿಸಿದೆ.
9. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಕಳುಹಿಸಿದೆ.
10. ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿರವರ ಮಾಹಿತಿಗಾಗಿ ಕಳುಹಿಸಿದೆ.
11. ವಾರ್ಡ್ ಕಮಿಟಿ ಸದಸ್ಯರುಗಳ ಮಾಹಿತಿಗಾಗಿ ಕಳುಹಿಸಿದೆ.
12. ಕಛೇರಿ ಕಡತಕ್ಕೆ.